# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 43(76) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | **13.02.2023** |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಪ್ರಶ್ನೆ | | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳ ಮತ್ತು ಪಾಲಿಟೆಕ್ನಿಕ್‌ಗಳ ಸಂಖ್ಯೆ ಎಷ್ಟು; ಸದರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಹಾಗೂ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು; ಖಾಲಿಯಿರುವ ಹುದ್ದೆಗಳೆಷ್ಟು;(ವಿವರ ನೀಡುವುದು) | ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳ ಮತ್ತು ಪಾಲಿಟೆಕ್ನಿಕ್‌ಗಳ ಸಂಖ್ಯೆ ಮತ್ತು ಸದರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಹಾಗೂ ಅರೆಕಾಲಿಕ ಉಪನ್ಯಾಸಕರ ಸಂಖ್ಯಾ ವಿವರ ಕೆಳಕಂಡಂತಿವೆ; |

ಸಂಸ್ಥೆಗಳ ಸಂಖ್ಯೆ

| ಸಂಸ್ಥೆಗಳು | ಸರ್ಕಾರಿ | ಅನುದಾನಿತ | ಅನುದಾನ ರಹಿತ |
|---|---|---|---|
| ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ | 16 | 10 | 204 |
| ಪಾಲಿಟೆಕ್ನಿಕ್ ಸಂಖ್ಯೆ | 102 | 44 | 134 |

ಪ್ರಸ್ತುತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಹಾಗೂ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಮತ್ತು ಖಾಲಿ ಹುದ್ದೆಗಳ ಸಂಖ್ಯೆ ಕೆಳಕಂಡಂತಿವೆ

| ಸಂಸ್ಥೆಗಳು | ಸರ್ಕಾರಿ | | | | ಅನುದಾನಿತ | | | |
|---|---|---|---|---|---|---|---|---|
| | ಮಂಜೂರಾದ ಹುದ್ದೆಗಳ ಸಂಖ್ಯೆ | ಖಾಯಂ ಉಪನ್ಯಾಸಕರ ಸಂಖ್ಯೆ | ಅರೆಕಾಲಿಕ ಉಪನ್ಯಾಸಕರ ಸಂಖ್ಯೆ | ಖಾಲಿ ಹುದ್ದೆ ಸಂಖ್ಯೆ | ಮಂಜೂರಾದ ಹುದ್ದೆಗಳ ಸಂಖ್ಯೆ | ಖಾಯಂ ಉಪನ್ಯಾಸಕರ ಸಂಖ್ಯೆ | ಅರೆಕಾಲಿಕ ಉಪನ್ಯಾಸಕರ ಸಂಖ್ಯೆ | ಖಾಲಿ ಹುದ್ದೆ ಸಂಖ್ಯೆ |
| ಇಂಜಿನಿಯರಿಂಗ್ ಕಾಲೇಜುಗಳು | 646 | 342 | 339 | 304 | 939 | 474 | 00 | 465 |
| ಪಾಲಿಟೆಕ್ನಿಕ್ | 2812 | 1859 | 1301 | 953 | 1320 | 953 | 00 | 367 |

ಅನುದಾನ ರಹಿತ ಇಂಜಿನಿಯರಿಂಗ್ / ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಎಐಸಿಟಿಇ ಮಾರ್ಗಸೂಚಿಗಳನ್ವಯ ಹುದ್ದೆಗಳು ಮಂಜೂರಾಗಿದ್ದು, ಅದರಂತೆ ಕಾರ್ಯನಿರ್ವಹಿಸುತ್ತವೆ.

ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಅನುದಾನಿತ ಹಾಗೂ ಅನುದಾನ ರಹಿತ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಹಾಗೂ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು; ಖಾಲಿಯಿರುವ ಹುದ್ದೆಗಳೆಷ್ಟು;(ವಿವರ ನೀಡುವುದು)

ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳ ಸಂಖ್ಯೆ

| ಜಿಲ್ಲೆ | ಸಂಸ್ಥೆಗಳು | ಸರ್ಕಾರಿ | ಅನುದಾನಿತ | ಅನುದಾನ ರಹಿತ |
|---|---|---|---|---|
| ಉಡುಪಿ | ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ | 00 | 00 | 02 |
| | ಪಾಲಿಟೆಕ್ನಿಕ್ ಸಂಖ್ಯೆ | 03 | 01 | 02 |
| ದಕ್ಷಿಣ ಕನ್ನಡ | ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ | 00 | 00 | 18 |
| | ಪಾಲಿಟೆಕ್ನಿಕ್‌ಗಳ ಸಂಖ್ಯೆ | 03 | 03 | 04 |

ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಹಾಗೂ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಮತ್ತು ಖಾಲಿ ಹುದ್ದೆಗಳ ಸಂಖ್ಯೆ ಕೆಳಕಂಡಂತಿವೆ

| ಜಿಲ್ಲೆ | ಸಂಸ್ಥೆಗಳು | ಸರ್ಕಾರಿ | | | | ಅನುದಾನಿತ | | |
|---|---|---|---|---|---|---|---|---|
| | | ಮಂಜೂರಾದ ಹುದ್ದೆಗಳ ಸಂಖ್ಯೆ | ಖಾಯಂ ಉಪನ್ಯಾಸಕರ ಸಂಖ್ಯೆ | ಅರೆಕಾಲಿಕ ಉಪನ್ಯಾಸಕರ ಸಂಖ್ಯೆ | ಖಾಲಿ ಹುದ್ದೆ ಸಂಖ್ಯೆ | ಮಂಜೂರಾದ ಹುದ್ದೆಗಳ ಸಂಖ್ಯೆ | ಖಾಯಂ ಉಪನ್ಯಾಸಕರ ಸಂಖ್ಯೆ | ಅರೆಕಾಲಿಕ ಉಪನ್ಯಾಸಕರ ಸಂಖ್ಯೆ |
| ಉಡುಪಿ | ಇಂಜಿನಿಯರಿಂಗ್ ಕಾಲೇಜುಗಳು | - | - | - | - | - | - | - |
| | ಪಾಲಿಟೆಕ್ನಿಕ್ | 79 | 36 | 38 | 43 | 40 | 29 | - |
| ದಕ್ಷಿಣ ಕನ್ನಡ | ಇಂಜಿನಿಯರಿಂಗ್ ಕಾಲೇಜುಗಳು | - | - | - | - | - | - | - |
| | ಪಾಲಿಟೆಕ್ನಿಕ್ | 129 | 62 | 114 | 67 | 88 | 60 | - |

ಅನುದಾನರಹಿತ ಇಂಜಿನಿಯರಿಂಗ್ / ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಎಐಸಿಟಿಇ ಮಾರ್ಗಸೂಚಿಗಳನ್ವಯ ಹುದ್ದೆಗಳು ಮಂಜೂರಾಗಿದ್ದು, ಅದರಂತೆ ಕಾರ್ಯನಿರ್ವಹಿಸುತ್ತವೆ.

| | | |
|---|---|---|
| ಇ) | ಅರೆಕಾಲಿಕ ಉಪನ್ಯಾಸಕರ ವೇತನ ಹೆಚ್ಚಳ ಹಾಗೂ ಬೇಡಿಕೆಗಳನ್ನು ಪರಿಶೀಲಿಸಲು ಯಾವುದಾದರೂ ಸಮತಿ ರಚಿಸಲಾಗಿದೆಯೇ ರಚಿಸಿದ್ದಲ್ಲಿ, ಸದರಿ ಸಮಿತಿ ವರದಿ ನೀಡಿದೆಯೇ; ವರದಿ ನೀಡಿದ್ದಲ್ಲಿ ವರದಿಯ ಪ್ರತಿ ನೀಡುವುದು; | ಸರ್ಕಾರಿ ಇಂಜಿನಿಯರಿಂಗ್ ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳ ವೇತನ ಹೆಚ್ಚಳ ಹಾಗೂ ಬೇಡಿಕೆಗಳನ್ನು ಪರಿಶೀಲಿಸಲು ಯಾವುದೇ ಸಮಿತಿಯನ್ನು ರಚಿಸಲಾಗಿರುವುದಿಲ್ಲ. ಈ ವಿಷಯಕ್ಕೆ ಸಂಬಂಧಿಸಿದಂತೆ ಈಗ ಮನವಿ ಸ್ವೀಕೃತವಾಗಿರುವುದರ ಹಿನ್ನೆಲೆಯಲ್ಲಿ ಪರಿಷ್ಕರಿಸುವ ಬಗ್ಗೆ ಅಗತ್ಯ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಗಿದೆ. |
| ಈ). | ರಾಜ್ಯದ ಪದವಿ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರ ಗೌರವಧನವನ್ನು ಹೆಚ್ಚಿಸಿದ್ದು, ಪಾಲಿಟೆಕ್ನಿಕ್‌ಗಳ ಅರೆಕಾಲಿಕ ಉಪನ್ಯಾಸಕರ ಗೌರವಧನವನ್ನು ಹೆಚ್ಚಿಸದಿರಲು ಕಾರಣಗಳೇನು? | ಸರ್ಕಾರದ ಆದೇಶ ಸಂಖ್ಯೆ: ಇಡಿ 236 ಟಿಪಿಇ 2007, ದಿನಾಂಕ: 01.12.2008ರಲ್ಲಿ ಇಂಜಿನಿಯರಿಂಗ್ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರುಗಳಿಗೆ ಪಾಠ ಪ್ರವಚನ / ಪ್ರಯೋಗಾಲಯದ ತರಗತಿಯ ಪ್ರತಿ ಗಂಟೆಗೆ ರೂ. 500 (ಮಾಸಿಕ ಗರಿಷ್ಠ ರೂ. 10000 ಮೀರದಂತೆ) ಹಾಗೂ ಪಾಲಿಟೆಕ್ನಿಕ್ ಮತ್ತು ಕಿರಿಯ ತಾಂತ್ರಿಕ ಶಾಲೆಗಳ ಅರೆಕಾಲಿಕ ಉಪನ್ಯಾಸಕರುಗಳಿಗೆ ಪಾಠ ಪ್ರವಚನ / ಪ್ರಯೋಗಾಲಯದ ತರಗತಿಯ ಪ್ರತಿ ಗಂಟೆಗೆ ರೂ. 350 (ಮಾಸಿಕ ಗರಿಷ್ಠ ರೂ. 7500 ಮೀರದಂತೆ) ನಿಗದಿಪಡಿಸಲಾಗಿತ್ತು.<br><br>ತದನಂತರದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಡಿ 16 ಟಿಪಿಇ 2017, ದಿನಾಂಕ:11.12.2019 ಮತ್ತು ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020ರಲ್ಲಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ, ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.15000/- ಗಳನ್ನು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ, ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.12500/-ಗಳನ್ನು ಹೆಚ್ಚಿಸಿ ಆದೇಶಿಸಲಾಗಿದೆ. ಈ ಕುರಿತಂತೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಗಿದೆ. ತದನಂತರ ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| ಉ). | ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರ ಸೇವಾ ಭದ್ರತೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?(ವಿವರ ನೀಡುವುದು). | ಪ್ರಶ್ನೆ ಉದ್ಭವಿಸುವುದಿಲ್ಲ. |

**ಇಡಿ 44 ಟಿಇಸಿ 2023**

**(ಡಾ|| ಅಶ್ವತ್ಥನಾರಾಯಣ್.ಸಿ.ಎನ್)**
ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಇಲಾಖೆ ಸಚಿವರು